ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**1157**
ಉತ್ತರಿಸಬೇಕಾದ ದಿನಾಂಕ	:	22.09.2021
ಉತ್ತರಿಸಬೇಕಾದ ಸಚಿವರು	:	ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	2020-2021 ನೇ ಸಾಲಿನಲ್ಲಿ ಧಾರವಾಡ, ಗದಗ, ಹಾವೇರಿ ಜಿಲ್ಲೆಗೆ ಆಶ್ರಯ ಯೋಜನೆಯಡಿಯಲ್ಲಿ ಮನೆಗಳ ಹಂಚಿಕೆ ಮಾಡಲು ಮೀಸಲಿರಿಸಿದ ಅನುದಾನದ ಮೊತ್ತವೆಷ್ಟು ;	ಸರ್ಕಾರವು ಆಯವ್ಯಯದಲ್ಲಿ ಜಿಲ್ಲಾವಾರು/ವಿಧಾನ ಸಭಾ ಕ್ಷೇತ್ರವಾರು ಅನುದಾನವನ್ನು ಒದಗಿಸದೇ ಯೋಜನಾವಾರು ಮಾತ್ರ ಅನುದಾನವನ್ನು ಒದಗಿಸಿ ಬಿಡುಗಡೆ ಮಾಡಲಾಗುತ್ತಿದ್ದು, ಅದರಂತೆ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ವಸತಿ ಯೋಜನೆಗಳಡಿ ಜಿ.ಪಿ.ಎಸ್ ಆಧಾರಿತ ಭೌತಿಕ ಪ್ರಗತಿಗನುಗುಣವಾಗಿ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. 2020-21 ನೇ ಆರ್ಥಿಕ ವರ್ಷದಲ್ಲಿ ಧಾರವಾಡ, ಗದಗ, ಹಾವೇರಿ ಜಿಲ್ಲೆಯ ವ್ಯಾಪ್ತಿಯಲ್ಲಿ ಹಿಂದಿನ ಶ್ರೇಣಿಯ ಮನೆಗಳನ್ನು ಒಳಗೊಂಡಂತೆ ಒಟ್ಟಾರೆ ರೂ.122.66 ಕೋಟಿಗಳನ್ನು ಖರ್ಚು ಮಾಡಲಾಗಿದ್ದು, ಯೋಜನಾವಾರು ವಿವರ ಈ ಕೆಳಕಂಡಂತಿದೆ. (ರೂ.ಕೋಟಿಗಳಲ್ಲಿ)

ಯೋಜನೆ	ಬಿಡುಗಡೆ ಮಾಡಲಾದ ಮೊತ್ತ			
	ಧಾರವಾಡ	ಗದಗ	ಹಾವೇರಿ	ಒಟ್ಟು
ಬಸವ ವಸತಿ ಯೋಜನೆ	19.23	9.75	21.78	50.76
ಡಾ. ಬಿ. ಆರ್ ಅಂಬೇಡ್ಕರ್ ನಿವಾಸ್ ಯೋಜನೆ	5.73	22.16	10.53	38.42
ದೇವರಾಜ್ ಅರಸು ವಸತಿ ಯೋಜನೆ	0.79	0.84	1.49	3.12
ವಾಜಪೇಯಿ ನಗರ ವಸತಿ ಯೋಜನೆ	0.92	1.24	3.60	5.76
ಪ್ರಧಾನ ಮಂತ್ರಿ ಅವಾಸ್ ಯೋಜನೆ (ಗ್ರಾ)	3.60	4.93	3.78	12.32
ಪ್ರಧಾನ ಮಂತ್ರಿ ಅವಾಸ್ ಯೋಜನೆ (ನ)	0.47	7.08	4.73	12.28
ಒಟ್ಟು	**30.74**	**46.01**	**45.91**	**122.66**

(ಆ)	2020-2021 ನೇ ಸಾಲಿನಲ್ಲಿ ಧಾರವಾಡ, ಗದಗ, ಹಾವೇರಿ ಜಿಲ್ಲೆಯಲ್ಲಿ ಆಶ್ರಯ	2020-2021 ನೇ ವರ್ಷದಲ್ಲಿ ಧಾರವಾಡ, ಗದಗ, ಹಾವೇರಿ ಜಿಲ್ಲೆಗಳಲ್ಲಿ 14371 ಮನೆಗಳ ನಿರ್ಮಾಣ ಮಾಡುವ ಗುರಿಯನ್ನು ಹೊಂದಿದ್ದು, ಈ ಮನೆಗಳ ಎದುರಾಗಿ 11703

	ಯೋಜನೆಯಡಿಯಲ್ಲಿ ಮನೆಗಳ ನಿರ್ಮಾಣ ಮಾಡಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ;	ಮನೆಗಳು ಪೂರ್ಣಗೊಂಡಿರುತ್ತವೆ. ವಿವರ ಕೆಳಕಂಡಂತಿದೆ.

ಜಿಲ್ಲೆ	ಗುರಿ	ಪೂರ್ಣಗೊಂಡಿರುವ ಮನೆಗಳು
ಗದಗ	5081	3697
ಧಾರವಾಡ	3082	2877
ಹಾವೇರಿ	6208	5129
ಒಟ್ಟು	14371	11703

(ಇ)	ನಿರ್ದಿಷ್ಟ ಅವಧಿಯೊಳಗೆ ಮನೆಗಳ ಹಂಚಿಕೆ ಮಾಡಲು ವಿಫಲರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯದ ಕ್ರಮ ಕೈಗೊಂಡಿದೆ ?	ವಿವಿಧ ವಸತಿ ಯೋಜನೆಗಳಡಿಯಲ್ಲಿ ಮನೆಗಳ ನಿರ್ಮಾಣವನ್ನು ಫಲಾನುಭವಿಗಳೇ ಸ್ವತಃ ನಿರ್ಮಿಸಿ ಕೊಳ್ಳುತ್ತಿದ್ದಾರೆ. ಮನೆ ಕಾಮಗಾರಿಯನ್ನು ಪೂರ್ಣಗೊಳಿಸದೇ ನಿರ್ಮಾಣ ಹಂತದಲ್ಲಿ ಇರುವ ಮನೆಗಳ ಫಲಾನುಭವಿಗಳಿಗೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ ತಿಳುವಳಿಕೆ ಪತ್ರಗಳನ್ನು ನೀಡಿ ಹಾಗೂ ನೋಟೀಸ್ ಜಾರಿ ಮಾಡಿ ಶೀಘ್ರವಾಗಿ ಮನೆಗಳನ್ನು ನಿರ್ಮಿಸಿಕೊಳ್ಳಲು ತಿಳುವಳಿಕೆ ನೀಡಲಾಗುತ್ತಿದೆ. ಜಿಲ್ಲಾ ಮಟ್ಟದ ಅನುಷ್ಠಾನಾಧಿಕಾರಿಗಳೊಂದಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ಮನೆಗಳ ಪ್ರಗತಿ ಪರಿಶೀಲಿಸಲಾಗುತ್ತಿದೆ ಹಾಗೂ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರಿಗೆ ಅರೆ ಸರ್ಕಾರಿ ಪತ್ರ ಬರೆದು ಅಪೂರ್ಣಗೊಂಡ ಮನೆಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸುವಂತೆ ಸೂಚಿಸಲಾಗುತ್ತಿದೆ. ಇದಲ್ಲದೇ ನಿಗಮದ ಅಧಿಕಾರಿಗಳನ್ನೊಳಗೊಂಡ ತಂಡಗಳನ್ನು ವಿಭಾಗವಾರು ರಚಿಸಿ, ಜಿಲ್ಲೆಗಳಿಗೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ. ಒಟ್ಟಾರೆಯಾಗಿ ಪ್ರಗತಿ ಸಾಧಿಸಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಸಂಖ್ಯೆ :ವಇ 344 ಹೆಚ್‌ಎಎಂ 2021

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು